**ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001**

===========================================

**ಸಂ: ಸಿಎಂಐ/ಪ.ಪೋ.ಲ./ಫೆ–2019/2018–19** **ದಿನಾಂಕ: 25.01.2019**

**: : ಸುತ್ತೋಲೆ : :**

ವಿಷಯ: ಫೆಬ್ರವರಿ–2019ರ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಸಹಕಾರ ನೀಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರುರವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಆಕುಕ 271 ಪ್ರಕಾ 2018 ದಿನಾಂಕ:09.01.2019.

**********

ವಿಶ್ವ ಆರೋಗ್ಯ ಸಂಸ್ಥೆಯು ಭಾರತವನ್ನು ಪೋಲಿಯೋ ಮುಕ್ತ ರಾಷ್ಟ್ರವೆಂದು 2014ರಲ್ಲಿ ಘೋಷಿಸಲಾಗಿದೆ. ಆದಾಗ್ಯೂ ಪ್ರಸಕ್ತ ಸಾಲಿನಲ್ಲಿ ವಿಶ್ವದ ಕೆಲವು ಕಡೆ ಪೋಲಿಯೋ ಪ್ರಕರಣಗಳು ಪತ್ತೆಯಾಗಿದ್ದು, ಸೋಂಕು ಭಾರತಕ್ಕೂ ಹರಡುವ ಸಾಧ್ಯತೆ ಇದೆ. ಈ ನಿಟ್ಟಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ರಾಜ್ಯದಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ದಿನಾಂಕ:03.02.2019 ರಂದು ಹಮ್ಮಿಕೊಂಡಿದ್ದು, ಈ ಕಾರ್ಯಕ್ರಮವು ಯಶಸ್ವಿಗೊಳಿಸುವಲ್ಲಿ ಸಹಕರಿಸಬೇಕೆಂದು ಕೋರುತ್ತಾ, ಸದರಿ ಕಾರ್ಯಕ್ರಮದ ಕುರಿತು ದಿನಾಂಕ:31.01.2019 ಮತ್ತು ದಿನಾಂಕ:02.02.2019ರಂದು ಜಾಥಾ ಕಾರ್ಯಕ್ರಮ ಕೈಗೊಳ್ಳುವ ಮೂಲಕ ಸಮುದಾಯದಲ್ಲಿ ಜಾಗೃತಿ ಮೂಡಿಸುವಂತೆಯೂ ಹಾಗೂ ಪ್ರೌಢಶಾಲೆಗಳಲ್ಲಿ ಅಸ್ತಿತ್ವದಲ್ಲಿರುವ ಎನ್.ಎಸ್.ಎಸ್/ ಎನ್.ಸಿ.ಸಿ. ಘಟಕಗಳ ವಿದ್ಯಾರ್ಥಿಗಳ ಸಹಕಾರದಿಂದ ಪ್ರಸ್ತಾಪಿತ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಲು ಸಂಬಂಧಪಟ್ಟವರಿಗೆ ಸೂಚಿಸುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಲಾಗಿದೆ.

ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಶಾಲೆಗಳ ವಿದ್ಯಾರ್ಥಿಗಳು ದಿನಾಂಕ:31.01.2019 ಹಾಗೂ ದಿನಾಂಕ:02.02.2019 ರಂದು ಸಮುದಾಯದಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳ ಸಹಕಾರದೊಂದಿಗೆ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಫೆಬ್ರವರಿ–2019ರ ಕುರಿತಾದ ಘೋಷವಾಕ್ಯಗಳನ್ನು ಕೂಗುತ್ತಾ, ಭಿತ್ತಿ ಪತ್ರಗಳ ಪ್ರದರ್ಶಿಸುವ ಮೂಲಕ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ತಿಳಿಸಿದೆ ಹಾಗೂ ಹಾಲಿ ಪ್ರೌಢಶಾಲೆಗಳಲ್ಲಿ ಅಸ್ತಿತ್ವದಲ್ಲಿರುವ ಎನ್.ಎಸ್.ಎಸ್/ಎನ್.ಸಿ.ಸಿ. ಘಟಕಗಳ ವಿದ್ಯಾರ್ಥಿಗಳ ತಂಡ ರಚಿಸಿ ದಿನಾಂಕ:03.02.2019ರ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ದಿನದಂದು ಆರೋಗ್ಯ ಇಲಾಖೆಯ ಸಿಬ್ಬಂದಿಗಳೊಂದಿಗೆ ಪೋಲಿಯೋ ಕೇಂದ್ರಗಳಲ್ಲಿ ಒಬ್ಬ ಜವಾಬ್ದಾರಿಯುತ ಶಿಕ್ಷಕರ ಉಸ್ತುವಾರಿಯಲ್ಲಿ ಸಹಕಾರ ನೀಡುವಂತೆ ತಿಳಿಯಪಡಿಸಿದೆ.

ನಿರ್ದೇಶಕರು (ಪ್ರೌಢ ಶಿಕ್ಷಣ)

<u>ಇವರಿಗೆ,</u>

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆರವರುಗಳ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ (ಸಂಬಂಧಿಸಿದ ಉಪನಿರ್ದೇಶಕರುಗಳ ಮುಖಾಂತರ).

<u>ಪ್ರತಿಯನ್ನು:</u>

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರುರವರ ಮಾಹಿತಿಗಾಗಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ:105, ಮೊದಲನೇ ಮಹಡಿ, ವಿಕಾಸಸೌಧ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು–560001 ರವರಿಗೆ ಮಾಹಿತಿಗಾಗಿ.
3. ಕಛೇರಿ ಪ್ರತಿ.